# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ,
6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560003

ಸಂಖ್ಯೆ: ಕಶಾಪ&ಮೌಮ/ಪರೀಕ್ಷೆ/ಅ.ವಿ.ದಿ.ಎ/2022-23 ದಿನಾಂಕ:01.12.2022

## :: ಸುತ್ತೋಲೆ ::

ವಿಷಯ:- 2023ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಅನುತ್ತೀರ್ಣ ಹಾಗೂ ಫಲಿತಾಂಶ ತಿರಸ್ಕರಿಸಿದ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಸಂದಾಯ ಮಾಡಲು ಕೊನೆಯ ದಿನಾಂಕವನ್ನು ವಿಸ್ತರಿಸುವ ಕುರಿತು.

ಉಲ್ಲೇಖ: 1. ಪಪೂಶಿಇ/ಪರೀಕ್ಷೆ/ಪ.ವಿ.ಅ/2022-23 ದಿನಾಂಕ 10.10.2022

2. ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ:16.11.2022

* * * * * * *

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, 2023ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಅನುತ್ತೀರ್ಣ ಹಾಗೂ ಫಲಿತಾಂಶ ತಿರಸ್ಕರಿಸಿದ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಸಂದಾಯ ಮಾಡಲು ಉಲ್ಲೇಖಿತ-2ರ ಸುತ್ತೋಲೆಯನ್ವಯ ದಿನಾಂಕ 28.11.2022 ರವರೆಗೆ 700/- ರೂ ಗರಿಷ್ಠ ದಂಡಶುಲ್ಕದೊಂದಿಗೆ ಅವಕಾಶ ನೀಡಲಾಗಿತ್ತು. ಆದರೆ, ಪೋಷಕರು ಹಾಗೂ ವಿದ್ಯಾರ್ಥಿಗಳ ದೂರವಾಣಿ ಕರೆ ಮತ್ತು ಮನವಿ, ಪತ್ರಗಳ ಮೇರೆಗೆ ಸದರಿ ಪರೀಕ್ಷೆಗೆ ಶುಲ್ಕ ಪಾವತಿಸುವ ದಿನಾಂಕವನ್ನು ಈ ಕೆಳಕಂಡಂತೆ ವಿಸ್ತರಿಸಿ ಆದೇಶಿಸಲಾಗಿದೆ.

| ಕ್ರಮ ಸಂಖ್ಯೆ | ವಿವರ | ಅಭ್ಯರ್ಥಿಗಳು ಕಾಲೇಜಿಗೆ ಶುಲ್ಕ ಪಾವತಿಸಲು ದಿನಾಂಕ: | ಕಾಲೇಜಿನವರು ಶುಲ್ಕವನ್ನು ಖಜಾನೆಗೆ ಸಂದಾಯ ಮಾಡುವ ದಿನಾಂಕ | ಕಾಲೇಜಿನವರು ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಭರ್ತಿ ಮಾಡಲು ಕಡೇ ದಿನಾಂಕ | ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಅರ್ಜಿಗಳನ್ನು ಸಲ್ಲಿಸಬೇಕಾದ ದಿನಾಂಕ |
|---|---|---|---|---|---|
| 01 | ಶುಲ್ಕದ ಜೊತೆಗೆ 500/- ರೂ ದಂಡ ಶುಲ್ಕ ಮತ್ತು 700/- ರೂ ದಂಡ ಶುಲ್ಕದೊಂದಿಗೆ ವಿಶೇಷ ದಂಡ ಶುಲ್ಕ 1320 ರೂಗಳು. | 01.12.2022 ರಿಂದ 12.12.2022 | 13.12.2022 | 13.12.2022 | 14.12.2022 |

ಜಿಲ್ಲಾ ಉಪನಿರ್ದೇಶಕರು, ಪ್ರಾಂಶುಪಾಲರಿಂದ ಸ್ವೀಕರಿಸಿದ ಅರ್ಜಿಗಳನ್ನು SATS Portal ನಲ್ಲಿ Update ಮಾಡಿರುವುದನ್ನು ಖಾತ್ರಿ ಪಡಿಸಿಕೊಂಡು ಭರ್ತಿಮಾಡಿದ OMR / MCA, ಶುಲ್ಕ ಪಾವತಿಸಿದ ವಿದ್ಯಾರ್ಥಿಗಳ ಕ್ರೋಢೀಕೃತ ಪಟ್ಟಿ, ಶುಲ್ಕ ಪಾವತಿಸಿದ ಮೂಲ ಚಲನ್ ಮತ್ತು ಚೆಕ್‌ಲಿಸ್ಟ್‌ಅನ್ನು ಖುದ್ದಾಗಿ ಕೇಂದ್ರ ಕಛೇರಿಗೆ ಸಲ್ಲಿಸಬೇಕಾದ ದಿನಾಂಕ 16.12.2022

ಅಧ್ಯಕ್ಷರು

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ